ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅಂಗವಿಕಲರಿಗೆ ಮೀಸಲಾತಿ ಕಲ್ಪಿಸುವ ಬಗ್ಗೆ ಸ್ಪಷ್ಟೀಕರಣ ಕೋರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಪತ್ರ ಬರೆಯಲಾಗಿದೆ. ಸದರಿ ಇಲಾಖೆಯಿಂದ ಸ್ಪಷ್ಟೀಕರಣ ಬಂದ ಕೂಡಲೇ ಹುದ್ದೆಗಳ ಭರ್ತಿಗೆ ಕ್ರಮ ತೆಗೆದುಕೊಳ್ಳಲಾಗುವುದು.

ಆ) ಬಂದಿದೆ.

ಆಯವ್ಯಯ ಭಾಷಣದಲ್ಲಿ ಮಂಡಿಸಿದ ಅನುದಾನವು ಬಳಕೆಯಾಗಿರುವುದು

1133 (1575); ಶ್ರೀ ದತ್ತಾತ್ರೇಯ ಸಿ. ಪಾಟೀಲ್ ರೇವೂರ (ಅಪ್ಪುಗೌಡ) (ಗುಲ್ಬರ್ಗಾ ದಕ್ಷಿಣ)

ಅ) ದಿನಾಂಕ: 12–07–2013ರಂದು ಮಾನ್ಯ ಮುಖ್ಯಮಂತ್ರಿಗಳು ತಮ್ಮ ಆಯವ್ಯಯ ಭಾಷಣದಲ್ಲಿ ಮಂಡಿಸಿದ ಕಂಡಿಕೆ 396ರಲ್ಲಿ ಕಲಬುರಗಿ ಮಹಾನಗರಪಾಲಿಕೆಯಲ್ಲಿ ನಗರೋತ್ಥಾನ ಅಡಿಯಲ್ಲಿ ಮೂರನೇಹಂತದ ₹ 100 ಕೋಟಿ ಅನುದಾನ ಬಿಡುಗಡೆಯಾಗುವ ಕಾರಣಕ್ಕಾಗಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಕಾಮಗಾರಿಗಳ ಕ್ರಿಯಾ ಯೋಜನೆ ಸಲ್ಲಿಸಿ ಸುಮಾರು ದಿವಸಗಳಾದರೂ ಕಾರ್ಯರೂಪದಲ್ಲಿ ಬರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ ಈ ಅನುದಾನವನ್ನು ಯಾವ ವರ್ಷದಲ್ಲಿ ಬಳಸಿಕೊಂಡು ಕಲಬುರಗಿ ನಗರದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು (ವಿವರ ನೀಡುವುದು)?

ಶ್ರೀ ವಿನಯಕುಮಾರ್ ಸೊರಕೆ (ಮಾನ್ಯ ನಗರಾಭಿವೃದ್ಧಿ ಸಚಿವರು)

ಅ) ₹ 100 ಕೋಟಿ ವಿಶೇಷ ಅನುದಾನದ ನಗರೋತ್ಥಾನ 3ನೇ ಹಂತದ ಯೋಜನೆಯಡಿಯಲ್ಲಿ ಕಲಬುರಗಿ ನಗರದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ನಅಇ/211/ಎಸ್.ಎಫ್.ಸಿ/2014 ದಿನಾಂಕ 12–08–2014 ರಂದು

ಅನುಮೋದನೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಗಳ ಅನುಷ್ಠಾನಕ್ಕೆ ಯೋಜನಾ ಸಮಾಲೋಚಕರುಗಳನ್ನು ನಿಗದಿಪಡಿಸಲು ಟೆಂಡರ್ ಕರೆಯಲಾಗಿದ್ದು, ಟೆಂಡರ್ ಮೌಲ್ಯಮಾಪನ ಹಂತದಲ್ಲಿರುತ್ತದೆ.

ಆ) ಈ ಅನುದಾನವನ್ನು ಬಳಸಿಕೊಂಡು ಕಲಬುರಗಿ ನಗರದಲ್ಲಿ 2014–15 ರಿಂದ 2016–17ರವರೆಗೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ನಅಇ 08 ಎಸ್ಎಫ್ಸಿ 2014, ದಿನಾಂಕ: 12–05–2014ರಲ್ಲಿ ತಿಳಿಸಲಾಗಿದೆ. ಈ ಯೋಜನೆಗಾಗಿ ಪ್ರಸಕ್ತ ಸಾಲಿನಲ್ಲಿ ಕಲಬುರಗಿ ಮಹಾನಗರ ಪಾಲಿಕೆಗೆ ₹ 5.50 ಕೋಟಿಗಳ ಮೊತ್ತವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮರಳಿನ ಅಭಾವ ಎದುರಿಸುತ್ತಿರುವುದು

1134 (840); ಶ್ರೀ ದೇವೇಗೌಡ ಜಿ.ಟಿ (ಚಾಮುಂಡೇಶ್ವರಿ)

ಅ) ಮೈಸೂರು ನಗರ ಮತ್ತು ಜಿಲ್ಲೆಯಲ್ಲಿ ಬಡವರಿಗೆ ಆಶ್ರಯ ಮನೆ, ಸರ್ಕಾರಿ ಕಟ್ಟಡಗಳು, ಶಾಲಾ ಕಟ್ಟಡ ಮತ್ತು ಅಂಗನವಾಡಿ ಕಟ್ಟಡಗಳನ್ನು ಕಟ್ಟಲು ಮರಳಿನ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಮರಳಿನ ಅಭಾವವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು)

ಅ) ಬಂದಿದೆ.

ಆ) ಜಿಲ್ಲೆಯ 06 ತಾಲ್ಲೂಕುಗಳಲ್ಲಿ ಹರಿಯುವ ನದಿ ಪಾತ್ರಗಳಲ್ಲಿ ಒಟ್ಟು 1205 ಹೆಕ್ಟೇರ್ ವಿಸ್ತೀರ್ಣ ಪ್ರದೇಶದಲ್ಲಿ 92 ಮರಳು ಬ್ಲಾಕ್‌ಗಳನ್ನು ಗುರುತಿಸಲಾಗಿದೆ. ಪರಿಸರ ಇಲಾಖೆಯ ನಿಬಂಧನೆ ಪ್ರಕಾರ ನದಿ ಹರಿಯುವ ತಳಭಾಗದಲ್ಲಿ ಮರಳು ತೆಗೆಯುವುದನ್ನು (Ban on